ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಬೆಂಗಳೂರು ನಗರದಲ್ಲಿ ಸರ್ಕಾರಿ ನಿವೇಶನದಲ್ಲಿ ಗುತ್ತಿಗೆ ಪಡೆದು ನಡೆಸುತ್ತಿರುವ ರಿಕ್ರಿಯೇಷನ್ ಕ್ಲಬ್‌ಗಳ ಬಗ್ಗೆ

ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) -

100 (812) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ನಿವೇಶನದಲ್ಲಿ ಗುತ್ತಿಗೆ ಪಡೆದು ನಡೆಸುತ್ತಿರುವ ರಿಕ್ರಿಯೇಷನ್ ಕ್ಲಬ್‌ಗಳು ಎಷ್ಟು ; ಖಾಸಗಿಯಾಗಿ ನಡೆಸುತ್ತಿರುವ ರಿಕ್ರಿಯೇಷನ್ ಕ್ಲಬ್‌ಗಳು ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರಿ ನಿವೇಶನದಲ್ಲಿ ನಡೆಸುತ್ತಿರುವ ರಿಕ್ರಿಯೇಷನ್ ಕ್ಲಬ್‌ಗಳನ್ನು ಎಷ್ಟು ವರ್ಷ ಗುತ್ತಿಗೆಗೆ ನೀಡಲಾಗಿದೆ ; ಯಾವ ಮಾನದಂಡದಲ್ಲಿ ಗುತ್ತಿಗೆ ನೀಡಲಾಗಿದೆ;

(ಇ) ಈ ಕ್ಲಬ್‌ಗಳಲ್ಲಿ ಸದಸ್ಯತ್ವ ಹೊಂದಲು ಯಾವ ಅರ್ಹತೆಯನ್ನು ಅನುಸರಿಸಲಾಗುತ್ತಿದೆ ;

(ಈ) ಸದರಿ ಕ್ಲಬ್‌ಗಳಲ್ಲಿ ವಿಧಾನ ಮಂಡಲದ ಸದಸ್ಯರು ಸದಸ್ಯತ್ವ ಹೊಂದಲು ಸರ್ಕಾರ ಕ್ರಮ ಕೈಗೊಳ್ಳುವುದೇ ?